ವ್ಯಕ್ತಿತ್ವ ವಿಕಸನ ಕಾರ್ಯಕ್ರಮ

ಹುಬ್ಬಳಿ : ಸ್ಥಳೀಯ ಕೆ.ಎಲ್.ಇ ಸಂಸ್ಥೆಯ ಶಿಕ್ಷಣ ಮಹಾವಿದ್ಯಾಲಯ ಹಾಗೂ ಸ್ನಾತಕೋತ್ತರ ಶಿಕ್ಷಣ ವಿಭಾಗ ವಿದ್ಯಾನಗರ ಹುಬ್ಬಳ್ಳಿಯಲ್ಲಿ ದಿನಾಂಕ 24.05.2022 ರಂದು ವ್ಯಕ್ತಿತ್ವ ವಿಕಸನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಶ್ರೀ ರಾಜು ವಿ ಹಜಾರೆ ಯವರು ಪ್ರಶಿಕ್ಷಣಾರ್ಥಿಗಳಿಗೆ ಜೀವನದ ಮೌಲ್ಯಗಳನ್ನು ಅತ್ಯಂತ ಮಾರ್ಮಿಕವಾಗಿ ತಿಳಿಹೇಳಿದರು. ಇದೇ ಸಂದರ್ಭದಲ್ಲಿ ಸಹಾಯಕ ಪ್ರಾಧ್ಯಾಪಕರಾದ ಡಾ ಬಸವರಾಜ ವ್ಹಿ ಹಳೇಮನಿ ಅವರು ಮಾತನಾಡಿ ಎಲ್ಲಕ್ಕಿಂತ ಮಿಗಿಲಾದದ್ದು ಮಾನವೀಯ ಮೌಲ್ಯಗಳು ಅವುಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಂಡು ನಡೆಯೆಲು ಪ್ರಶಿಕ್ಷಣಾರ್ಥಿಗಳಿಗೆ ಕರೆಕೊಟ್ಟರು. ಅಧ್ಯಕ್ಷತೆಯನ್ನು ವಹಿಸಿದ್ದ ಮಹಾವಿದ್ಯಾಲಯದ ಪ್ರಾಚಾರ್ಯರಾದ ಡಾ ಲಿಂಗರಾಜ ಸಿ ಮುಳ್ಳಳ್ಳಿ ಅವರು ವೇದಿಕೆಯಲ್ಲಿ ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ಎಲ್ಲಾ ಬೋಧಕ ಮತ್ತು ಬೋಧಕೇತರ ಸಿಬ್ಬಂಧಿ ವರ್ಗದವರು ಹಾಗೂ ಪ್ರಥಮ ಮತ್ತು ದ್ವಿತೀಯ ವರ್ಷದ ಪ್ರಶಿಕ್ಷಣಾರ್ಥಿಗಳು ಕಾರ್ಯಕ್ರಮದ ಪ್ರಯೋಜನ ಪಡೆದರು.